**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/10/_ಸುತ್ತೋಲೆ/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು,
ದಿನಾಂಕ: 28.06.2021

# ಸುತ್ತೋಲೆ

**ವಿಷಯ:** ಎಲ್ಲಾ ಸರ್ಕಾರಿ, ಅನುದಾನಿತ , ಖಾಸಗಿ ಪ್ರಥಮ ದರ್ಜೆ ಕಾಲೇಜುಗಳು, ಪಾಲಿಟೆಕ್ನಿಕ್ ಗಳು ಹಾಗೂ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಕೋವಿಡ್ -19 ಲಸಿಕಾ ಅಭಿಯಾನವನ್ನು ಆಯೋಜಿಸುವ ಕುರಿತು.

**ಉಲ್ಲೇಖ:** ರಾಷ್ಟ್ರೀಯ ಆರೋಗ್ಯ ಅಭಿಯಾನದ ಪತ್ರ ಸಂಖ್ಯೆ: ಎನ್ ಹೆಚ್ ಎಂ/ಡಿಡಿ/ ಐಎಂಎಂ/20/2021-22 ದಿನಾಂಕ: 23/06/2021

*****

ಕೋವಿಡ್-19 ಸಾಂಕ್ರಾಮಿಕದ ವೈರಾಣು ಜನರ ಆರೋಗ್ಯ ಮತ್ತು ಜೀವಗಳಿಗೆ ಒಡ್ಡುತ್ತಿರುವ ಅಪಾಯವನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ರೋಗ ನಿರೋಧಕ ಶಕ್ತಿಯನ್ನು ವರ್ಧಿಸಲು ಮತ್ತು ರೋಗದ ಹರಡುವಿಕೆಯನ್ನು ತಡೆಗಟ್ಟಲು ಲಸಿಕೆಗಳನ್ನು ತೆಗೆದುಕೊಳ್ಳುವುದು ಅತ್ಯಗತ್ಯ ಕ್ರಮವಾಗಿರುತ್ತದೆ. ರಾಜ್ಯದ ಎಲ್ಲ ಪ್ರಥಮ ದರ್ಜೆ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಮತ್ತು ಎಂಜಿನಿಯರಿಂಗ್ ಕಾಲೇಜುಗಳ ವಿದ್ಯಾರ್ಥಿಗಳು, ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಯ ಸುರಕ್ಷತೆ ಮತ್ತು ಆರೋಗ್ಯದ ದೃಷ್ಟಿಯಿಂದ ಪ್ರತಿ ಕಾಲೇಜಿನಲ್ಲಿ ಲಸಿಕಾ ಅಭಿಯಾನವನ್ನು ಆಯೋಜಿಸುವುದು ಅತ್ಯಗತ್ಯವಾಗಿರುತ್ತದೆ. ಮುಂದುವರೆದು, ರಾಷ್ಟ್ರೀಯ ಆರೋಗ್ಯ ಅಭಿಯಾನವು ಉಲ್ಲೇಖಿತ ಪತ್ರದಲ್ಲಿ ಎಲ್ಲ ಕಾಲೇಜುಗಳಲ್ಲಿ ಕೋವಿಡ್ ಲಸಿಕಾ ಅಭಿಯಾನವನ್ನು ನಡೆಸುವಂತೆ ತಿಳಿಸಿರುತ್ತದೆ. ಮುಂದಿನ ತಿಂಗಳಿನಿಂದ ಉನ್ನತ ಶಿಕ್ಷಣ ಇಲಾಖೆ ಎಲ್ಲಾ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವುದರಿಂದ ಈ ಕೋವಿಡ್-19 ಲಸಿಕಾ ಅಭಿಯಾನ ಕಾರ್ಯಕ್ರಮ ಅತ್ಯಂತ ಮಹತ್ವಪೂರ್ಣದ್ದಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ತಾಂತ್ರಿಕ ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರು, ತಮ್ಮ ವ್ಯಾಪ್ತಿಯ ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಸಹಯೋಗದೊಂದಿಗೆ ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಇವರು ಬಿ.ಬಿ.ಎಂ.ಪಿ. ವಿಶೇಷ ಆಯುಕ್ತರು (ಆರೋಗ್ಯ) ರವರನ್ನು ಸಂಪರ್ಕಿಸಿ, ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಸರ್ಕಾರಿ, ಅನುದಾನಿತ, ಖಾಸಗಿ ಪ್ರಥಮ ದರ್ಜೆ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಹಾಗೂ ಎಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರು ತಮ್ಮ ತಮ್ಮ ಕಾಲೇಜುಗಳಲ್ಲಿ ಲಸಿಕಾ ಅಭಿಯಾನವನ್ನು ಹಮ್ಮಿಕೊಳ್ಳುವ ಕುರಿತು ಕೆಳಕಂಡ ಕ್ರಮಗಳನ್ನು ಈ ಕೂಡಲೇ ಕೈಗೊಳ್ಳತಕ್ಕದ್ದು:

1. ಕೋವಿಡ್ ಲಸಿಕಾ ಅಭಿಯಾನಕ್ಕೆ ಸಂಬಂಧಪಟ್ಟಂತೆ ಆಯಾ ಕಾಲೇಜುಗಳ ಪ್ರಾಂಶುಪಾಲರೇ ಈ ತಕ್ಷಣದಿಂದ ನೋಡಲ್ ಅಧಿಕಾರಿಗಳಾಗಿ ಕಾರ್ಯ ನಿರ್ವಹಿಸತಕ್ಕದ್ದು.
2. ಪ್ರಾಂಶುಪಾಲರುಗಳು ತಪ್ಪದೆ ತಮ್ಮ ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಿ, ದಿನಾಂಕ:01.07.2021 ರಿಂದ ತಮ್ಮ ಕಾಲೇಜುಗಳಲ್ಲಿರುವ ವಿದ್ಯಾರ್ಥಿಗಳು, ಬೋಧಕರು ಮತ್ತು ಬೋಧಕೇತರರ ಒಟ್ಟು ಸಂಖ್ಯೆಗೆ ಅನುಗುಣವಾಗಿ ತಮ್ಮ ಕಾಲೇಜಿನಲ್ಲಿ ಲಸಿಕಾಕರಣ ಅಭಿಯಾನವನ್ನು ಆಯೋಜಿಸುವಂತೆ ಪ್ರಸ್ತಾವನೆ ಸಲ್ಲಿಸಿ, ಲಸಿಕಾಕರಣದ ಷೆಡ್ಯೂಲ್ ಅನ್ನು ಪಡೆದುಕೊಳ್ಳತಕ್ಕದ್ದು.

3. ಜಿಲ್ಲಾಧಿಕಾರಿಗಳ ಆದೇಶದನ್ವಯ ಆರೋಗ್ಯಾಧಿಕಾರಿಗಳ ಸಮನ್ವಯದೊಂದಿಗೆ ಲಸಿಕಾ ಅಭಿಯಾನವನ್ನು ತಮ್ಮ ಕಾಲೇಜಿನ ಆವರಣದಲ್ಲಿ ಆಯೋಜಿಸುವುದು.
4. ಲಸಿಕಾ ಅಭಿಯಾನವನ್ನು ಜಿಲ್ಲಾಧಿಕಾರಿಗಳಿಂದ ಪಡೆದ ಷೆಡ್ಯೂಲ್ ಅನ್ವಯ ತಮ್ಮ ಕಾಲೇಜಿನಲ್ಲಿ ಆಯೋಜಿಸಲು ಅಗತ್ಯವಾದ ಎಲ್ಲ ಬಗೆಯ ಸಹಕಾರವನ್ನು ಆರೋಗ್ಯಾಧಿಕಾರಿಗಳಿಗೆ ನೀಡತಕ್ಕದ್ದು.
5. ತಮ್ಮ ಕಾಲೇಜುಗಳ ಫಲಾನುಭವಿಗಳಿಗೆ ಲಸಿಕಾಕರಣ ಅಭಿಯಾನದ ದಿನಾಂಕ ಮತ್ತು ಸಮಯದ ಕುರಿತು ಸ್ಪಷ್ಟ ಮಾಹಿತಿಯನ್ನು ವಾಟ್ಸಾಪ್, ಮೆಸೇಜ್, ಫೋನ್ ಕಾಲ್, ಪತ್ರ ಇವೇ ಮೊದಲಾದ ಮಾಧ್ಯಮಗಳ ಮೂಲಕ ನೀಡುವುದು.
6. ತಮ್ಮ ಕಾಲೇಜುಗಳ ವಿದ್ಯಾರ್ಥಿಗಳು, ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗೆ ಲಸಿಕಾಕರಣದ ಮಹತ್ವವನ್ನೂ ಹಾಗೂ ತುರ್ತು ಅಗತ್ಯವನ್ನೂ ಮನವರಿಕೆ ಮಾಡಿಕೊಟ್ಟು, ಅವರೆಲ್ಲರೂ ನಿಗದಿತ ದಿನಾಂಕದಂದು ತಮ್ಮ ಕಾಲೇಜಿನಲ್ಲಿ ನಡೆಯುವ ಕೋವಿಡ್ ಲಸಿಕಾ ಅಭಿಯಾನದಲ್ಲಿ ತಪ್ಪದೆ ಭಾಗವಹಿಸಿ, ಲಸಿಕೆ ಪಡೆಯುವಂತೆ ಪ್ರೋತ್ಸಾಹಕರ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು.
7. ಲಸಿಕಾ ಅಭಿಯಾನದಲ್ಲಿ ಭಾಗವಹಿಸಲು ಅಗತ್ಯವಾದ ಆಧಾರ್ ಕಾರ್ಡ್ ಇತ್ಯಾದಿಯನ್ನು ವಿದ್ಯಾರ್ಥಿಗಳು, ಬೋಧಕರು ಮತ್ತು ಬೋಧಕೇತರ ಸಿಬ್ಬಂದಿ ತಪ್ಪದೆ ತರುವಂತೆ ಸೂಚಿಸತಕ್ಕದ್ದು.
8. ಲಸಿಕಾ ಅಭಿಯಾನದ ಎಲ್ಲ ಹಂತಗಳಲ್ಲಿ ಕಾಲೇಜಿನಲ್ಲಿ ವಿದ್ಯಾರ್ಥಿಗಳು, ಬೋಧಕರು ಮತ್ತು ಬೋಧಕೇತರ ಸಿಬ್ಬಂದಿ ಭಾರತ ಸರ್ಕಾರದ ಕೋವಿಡ್-19 ಲಸಿಕಾಕರಣ ಮಾರ್ಗಸೂಚಿಗಳನ್ನು ಚಾಚೂ ತಪ್ಪದೆ ಅನುಸರಿಸುವಂತೆ ಕ್ರಮವಹಿಸುವುದು.
9. ತಮ್ಮ ಕಾಲೇಜಿನಲ್ಲಿ ನಡೆದ ಲಸಿಕಾ ಅಭಿಯಾನದ ಕುರಿತು ಸಚಿತ್ರ ವರದಿಯನ್ನು ಸಂಬಂಧಪಟ್ಟ ಜಂಟಿನಿರ್ದೇಶಕರಿಗೆ ಸಲ್ಲಿಸುವುದು.
10. ಸಂಬಂಧಪಟ್ಟ ಜಂಟಿ ನಿರ್ದೇಶಕರು ತಮ್ಮ ವ್ಯಾಪ್ತಿಯಲ್ಲಿನ ಪ್ರಾಂಶುಪಾಲರ ಮೂಲಕ ಲಸಿಕಾ ಅಭಿಯಾನ ಯಶಸ್ವಿಯಾಗುವಂತೆ ಅಗತ್ಯ ಕ್ರಮವಹಿಸುವುದು.

**ಆಯುಕ್ತರು**

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

ಇವರಿಗೆ:

1. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲ್ಬರ್ಗಾ,
4. ಎಲ್ಲಾ ಜಂಟಿ ನಿರ್ದೇಶಕರುಗಳು, ತಾಂತ್ರಿಕ ಶಿಕ್ಷಣ ಇಲಾಖೆ,
5. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು,
6. ರಾಜ್ಯದ ಎಲ್ಲಾ ಸರ್ಕಾರಿ ಪಾಲಿಟೆಕ್ನಿಕ್ ಗಳ ಪ್ರಾಂಶುಪಾಲರುಗಳು.
7. ರಾಜ್ಯದ, ಎಲ್ಲಾ ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳು.
8. ಕಛೇರಿ ಪ್ರತಿ.